ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 28 ಬೆಮಪ್ರಾ 2018(ಭಾ-1)

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ 28.08.2019

3845
31/8/19

## ಸುತ್ತೋಲೆ

ವಿಷಯ: ನಗರ ಸ್ಥಳೀಯ ಯೋಜನಾ ಪ್ರದೇಶಗಳು / ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಅನಧಿಕೃತ ಬೆಳವಣಿಗೆಗಳನ್ನು ತಡೆಗಟ್ಟುವ ಕುರಿತು.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ 30.03.2019 ರಂದು ನಡೆದ ಸಭೆಯ ತೀರ್ಮಾನ.

*********

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ದಿನಾಂಕ 30.03.2019 ರಂದು ನಡೆದ ಸಭೆಯಲ್ಲಿ ಬೆಳಗಾವಿ ನಗರದಲ್ಲಿ ಹಲವಾರು ಅನಧಿಕೃತ ವಿನ್ಯಾಸಗಳು ಹಾಗೂ ಕಟ್ಟಡಗಳು ಬಂದಿದ್ದು, ಇವುಗಳ ವಿರುದ್ಧ ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಮತ್ತು ಬೆಳಗಾವಿ ಮಹಾನಗರ ಪಾಲಿಕೆ ವತಿಯಿಂದ ಯಾವುದೇ ಕ್ರಮ ಕೈಗೊಳ್ಳದೇ ಇರುವುದನ್ನು ಗಮನಿಸಲಾಗಿದೆ.

ಯೋಜನಾಬದ್ಧವಾದ ನಗರಗಳ ಅಭಿವೃದ್ಧಿಗಾಗಿ ಕಾಯ್ದೆಯನ್ವಯ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು ಹಾಗೂ ಅನಧಿಕೃತ ಬೆಳವಣಿಗೆಗಳನ್ನು ತಡೆಗಟ್ಟುವುದು ನಗರಭಿವೃದ್ಧಿ ಪ್ರಾಧಿಕಾರ, ಯೋಜನಾ ಪ್ರಾಧಿಕಾರ, ಮಹಾನಗರ ಪಾಲಿಕೆಗಳ ಹಾಗೂ ಸ್ಥಳೀಯ ಸಂಸ್ಥೆಗಳ ಒಂದು ಪ್ರಮುಖ ಕರ್ತವ್ಯವಾಗಿರುತ್ತದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961, ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ 1976 ಹಾಗೂ ಕರ್ನಾಟಕ ಮುನಿಸಿಪಲ್ ಕಾಯ್ದೆ 1964 ರಲ್ಲಿ ಅನಧಿಕೃತ ಬೆಳವಣಿಗೆಗಳ ವಿರುದ್ಧ ಕೈಗೊಳ್ಳಬೇಕಾದ ಕ್ರಮದ ಬಗ್ಗೆ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಅನಧಿಕೃತ ಬೆಳವಣಿಗೆಗಳನ್ನು ನಿರ್ಮಾಣ ಸಂದರ್ಭದಲ್ಲಿಯೇ ತಡೆಗಟ್ಟಬೇಕಿದ್ದು, ತದನಂತರದಲ್ಲಿ ಅವುಗಳನ್ನು ನೆಲಸಮ ಮಾಡುವುದು ಕಷ್ಟಸಾಧ್ಯವಾಗಿದ್ದು, ಸಂಬಂಧಪಟ್ಟ ಮಾಲೀಕರು ನ್ಯಾಯಾಲಯದ ಮೊರೆ ಹೋಗುವ ಸಾಧ್ಯತೆ ಇರುತ್ತದೆ. ಅದಾಗ್ಯೂ ರಾಜ್ಯದ ನಗರ/ ಪಟ್ಟಣ ಪ್ರದೇಶದಲ್ಲಿ ಸ್ಥಳೀಯ ಯೋಜನಾ ಪ್ರದೇಶ, ಮಹಾನಗರ ಪಾಲಿಕೆ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಹಲವಾರು ಅನಧಿಕೃತ ಬೆಳವಣಿಗೆಗಳು ಬರುತ್ತಿದ್ದು, ಇವುಗಳ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದೇ ಇರುವುದು ಕಂಡುಬಂದಿದ್ದು, ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಲಾಗಿದೆ.

ಆದ್ದರಿಂದ ಇನ್ನು ಮುಂದೆ ನಗರಾಭಿವೃದ್ಧಿ ಪ್ರಾಧಿಕಾರಗಳು, ಯೋಜನಾ ಪ್ರಾಧಿಕಾರಗಳು ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ವಿನ್ಯಾಸಗಳನ್ನು ಹಾಗೂ ಮಹಾನಗರ ಪಾಲಿಕೆಗಳು ಹಾಗೂ ಸ್ಥಳೀಯ ಸಂಸ್ಥೆಗಳು ತಮ್ಮ ವ್ಯಾಪ್ತಿಯಲ್ಲಿ ಅನಧಿಕೃತ ಕಟ್ಟಡಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ನಿಯಮಿತವಾಗಿ ಸ್ಥಳ ಪರಿಶೀಲನೆ ಕೈಗೊಳ್ಳುವಂತೆ ಹಾಗೂ ಯಾವುದಾದರೂ ಅನಧಿಕೃತ ಬೆಳವಣಿಗೆ ಕಂಡುಬಂದಲ್ಲಿ ಕರ್ನಾಟಕ ನಗರ ಮತ್ತು

31/8
31.8.19
31/8/19

ಗ್ರಾಮಾಂತರ ಯೋಜನಾ ಕಾಯ್ದೆ 1961 / ಕರ್ನಾಟಕ ಮಹಾನಗರ ಪಾಲಿಕೆಗಳ ಕಾಯ್ದೆ 1976 / ಕರ್ನಾಟಕ ಮುನಿಸಿಪಲ್ ಕಾಯ್ದೆ 1964 ಅನ್ವಯ ಕಟ್ಟುನಿಟ್ಟಾಗಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಪ್ರತಿ ಮೂರು ತಿಂಗಳಿಗೊಮ್ಮೆ ಅನಧಿಕೃತ ಬೆಳವಣಿಗೆಗಳ ವಿರುದ್ಧ ಕೈಗೊಂಡ ಕ್ರಮದ ಬಗ್ಗೆ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸಹ ಸೂಚಿಸಲಾಗಿದೆ. ತಪ್ಪಿದಲ್ಲಿ ಸಂಬಂಧಿಸಿದ ಆಯುಕ್ತರು/ ಸದಸ್ಯ ಕಾರ್ಯದರ್ಶಿಗಳು/ ಪೌರಾಯುಕ್ತರು/ ಮುಖ್ಯಾಧಿಕಾರಿಗಳನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಿ ಶಿಸ್ತಿನ ಕ್ರಮ ಜರುಗಿಸಲಾಗುವುದು.

(ನಾಗರಾಜ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ,

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
2) ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ವಿಶ್ವೇಶ್ವರಯ್ಯ ಟವರ್, ಬೆಂಗಳೂರು
3) ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.
4) ಆಯುಕ್ತರು, ರಾಜ್ಯದ ಎಲ್ಲಾ ಮಹಾನಗರ ಪಾಲಿಕೆಗಳು.
5) ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ಯೋಜನಾ ಪ್ರಾಧಿಕಾರಗಳು.- ನಿರ್ದೇಶಕರು, ನ.ಗ್ರಾ.ಯೋ.ರವರ ಮುಖಾಂತರ.
6) ರಾಜ್ಯದ ಎಲ್ಲಾ ಪೌರಾಯುಕ್ತರು / ಮುಖ್ಯಾಧಿಕಾರಿಗಳು, ನಗರಸಭೆ / ಪುರಸಭೆ / ಪಟ್ಟಣ ಪಂಚಾಯಿತಿ.- ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ರವರ ಮುಖಾಂತರ.
7) ಶಾಖಾ ರಕ್ಷಾ ಕಡತ.

ಸಂಖ್ಯೆ: ನಗ್ರಾಯೋ:ಜಂನಿ:12:CIRC:2019-20
ಸರ್ಕಾರದ ಸುತ್ತೋಲೆ ಸಂಖ್ಯೆ:ನಅಇ 28 ಬೆಮಪ್ರಾ 2018(ಭಾಗ-1),
ಬೆಂಗಳೂರು, ದಿನಾಂಕ:28-08-2019.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕಃ

<u>ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.</u>

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ.
2. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು.
3. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು/ಮೈಸೂರು/ ಕಲಬುರಗಿ.
4. ಆಯುಕ್ತರು, ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು.

3......

5. ಸದಸ್ಯ ಕಾರ್ಯದರ್ಶಿಗಳು, ರಾಜ್ಯದ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು.
6. ಮುಖ್ಯಾಧಿಕಾರಿಗಳು/ಆಯುಕ್ತರು, ಪುರಸಭೆ/ನಗರಸಭೆ ಯೋಜನಾ ಪ್ರಾಧಿಕಾರಗಳು.
7. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ.
8. ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಗಳಿಗೆ.
9. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡಲು ಸಂಬಂಧಪಟ್ಟ ವಿಷಯ ನಿರ್ವಾಹಕರಿಗೆ.
10. ಸದರಿ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶನಾಲಯದ ತಾಂತ್ರಿಕ ವಿಭಾಗದ ಇ-ಮೇಲ್ ವಿಷಯ ನಿರ್ವಾಹಕರಿಗೆ.
11. ಹೆಚ್ಚುವರಿ ಪ್ರತಿಗಳು.

04/09/19

ನಗರ ಮತ್ತು ಗ್ರಾಮಾಂತರ ಯೋಜನಾ
ನಿರ್ದೇಶಕರ ಪರವಾಗಿ

15 NK(Suma)Circ